# ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಹೊನ್ನಾಳಿ

## ಸಿ.ಸಿ.538/2020

ಸಾಕ್ಷಿದಾರರ ಹೇಳಿಕೆಃ

**ಹೆಸರು** : ಸುರೇಶ ಟಿ ಪಿ ಚಾಸಾಃ **8** ಫ್ರಾಸಾಃ **1**

**ತಂದೆಯ ಹೆಸರು** : ಪರಶುರಾಮಪ್ಪ ಪಿ ಕೆ

**ವಯಸ್ಸು** : 45 ವರ್ಷ

**ವೃತ್ತಿ** : ವ್ಯವಸಾಯ

**ವಾಸಸ್ಥಳ** : ತಕ್ಕನಹಳ್ಳಿ ಗ್ರಾಮ

ದಿನಾಂಕಃ **28-01-2026** ರಂದು ಸಾಕ್ಷಿಯನ್ನು ಕರೆದು ಪ್ರಮಾಣವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆ :-ಮಾನ್ಯ ಸ.ಸ.ಅ. ರವರಿಂದಃ

1 ಮತ್ತು 3 ನೇ ಆರೋಪಿತರು ಗೊತ್ತಿಲ್ಲ. ಚಾಸಾ-9 ಗೊತ್ತು. ಈಗೇ ಸುಮಾರು 6 ವರ್ಷಗಳ ಹಿಂದೆ ನನ್ನ ವೈಯಕ್ತಿಕ ಕೆಲಸದ ಮೇರೆಗೆ ಹೊನ್ನಾಳಿ ಪೊಲೀಸ್ ಠಾಣೆಗೆ ಹೋದಾಗ ಪೊಲೀಸರ ಕೋರಿಕೆಯ ಮೇರೆಗೆ 3 ದಾಖಲೆಗಳಿಗೆ ಸಹಿಯನ್ನು ಮಾಡಿರುತ್ತೇನೆ. ಅದರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ಪೊಲೀಸರು ನನ್ನ ಸಮಕ್ಷಮ ಯಾವುದೇ ಸ್ಥಳ ಮಹಜರ್ ಕ್ರಮ ಜರುಗಿಸಿ ಕಚ್ಚಾ ನಕಾಶೆಯನ್ನು ತಯಾರಿಸಿರುವುದಿಲ್ಲ. ಸಾಕ್ಷಿಯ 2 ಛಾಯಾಚಿತ್ರಗಳಲ್ಲಿ ತಾನು ಇರುವ ಬಗ್ಗೆ ನೋಡಿ ಗುರುತಿಸಿದ್ದು ಆದರೆ ಯಾವ ವಿಚಾರಕ್ಕೆ ತೆಗೆದಿದ್ದಾರೆ ಎಂಬ ವಿಚಾರ ನನಗೆ ಗೊತ್ತಿಲ್ಲ. ಈ ಬಗ್ಗೆ ನಾನು ಪೊಲೀಸರಿಗೆ ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ.

ಸ್ಥಳ ಮಹಜರ್ ಸಮಯದಲ್ಲಿ ನೀಡಿದ ನೋಟೀಸ್ ನ್ನು ನಿಪಿ-1 ಎಂದು, ಸಾಕ್ಷಿಯ ಸಹಿಯನ್ನು ನಿಪಿ-1(ಎ) ಎಂದು, ಸ್ಥಳ ಮಹಜರ್ ನ್ನು ನಿಪಿ-2 ಎಂದು, ಸಾಕ್ಷಿಯ ಸಹಿಯನ್ನು ನಿಪಿ-2(ಎ) ಎಂದು, ಕಚ್ಚಾ ನಕಾಶೆಯನ್ನು ನಿಪಿ-3 ಎಂದು, ಸಾಕ್ಷಿಯ ಸಹಿಯನ್ನು ನಿಪಿ-3(ಎ) ಎಂದು, 2 ಛಾಯಾಚಿತ್ರಗಳನ್ನು ನಿಪಿ-4 ಮತ್ತು 5 ಎಂದು, ಸಿಡಿಯನ್ನು ನಿಪಿ-6 ಎಂದು ಗುರುತಿಸಲಾಯಿತು.

ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸ.ಸ.ಅ. ರವರು ಅನುಮತಿ ಕೋರಿದ್ದಾರೆ. ಸೂಕ್ತ ಕಾರಣ ನೀಡಿದ ಮೇರೆಗೆ ಅನುಮತಿ ನೀಡಲಾಗಿದೆ.

ಪಾಟೀ ಸವಾಲು :- ಮಾನ್ಯ ಸ.ಸ.ಅ. ರವರಿಂದ:-

ದಿಃ 09.12.2019 ರಂದು ಪೊಲೀಸರಿಂದ ನಿಪಿ-1 ರಂತೆ ನೋಟೀಸ್ ಪಡೆದುಕೊಂಡಿರುತ್ತೇನೆ ಎಂದರೆ ಸರಿಯಲ್ಲ. ದಿಃ 09.12.2019 ರಂದು ಸಂಜೆ 5.15 ರಿಂದ 6.15 ಗಂಟೆ ಸಮಯದಲ್ಲಿ 3 ನೇ ಆರೋಪಿ ಸ್ಥಳ ತೋರಿಸಿದ ಮೇರೆಗೆ ನನ್ನ ಮತ್ತು ಚಾಸಾ-9 ರವರ ಸಮಕ್ಷಮ ನಿಪಿ-2 ರಂತೆ ಸ್ಥಳ ಮಹಜರ್ ಕ್ರಮ ಜರುಗಿಸಿ ,ನಿಪಿ-3 ರಂತೆ ಕಚ್ಛಾ ನಕಾಶೆಯನ್ನು ತಯಾರಿಸಿ , ನಿಪಿ-4 ಮತ್ತು 5 ರಂತೆ ಛಾಯಾಚಿತ್ರಗಳನ್ನು ತೆಗೆದಿರುತ್ತಾರೆ ಎಂದರೆ ಸರಿಯಲ್ಲ. ಈ ಬಗ್ಗೆ ಪೊಲೀಸರಿಗೆ ನಿಪಿ-7 ರಂತೆ ಹೇಳಿಕೆಯನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ.

ಎಲ್ಲಾ ವಿಚಾರ ಗೊತ್ತಿದ್ದರೂ ಸಹ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲು :- ಆರೋಪಿತರ ಪರ ವಕೀಲರು ಇಲ್ಲ ಎಂದು ತಿಳಿಸಿರುತ್ತಾರೆ.

ಮರುವಿಚಾರಣೆ ಇಲ್ಲ.

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.